ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳನ್ನು ಅನುದಾನಕ್ಕೊಳಪಡಿಸುವ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ):-

532(598) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡುತ್ತಿದ್ದು, 1986 ರಿಂದ ಸ್ಥಗಿತಗೊಳಿಸಿರುವುದು ನಿಜವೇ; ಹಾಗಿದ್ದಲ್ಲಿ, 2006 ರಿಂದ 2008 ರಲ್ಲಿದ್ದ ಸರ್ಕಾರ 1993 ರಿಂದ 1995 ರವರೆಗೆ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ಅನುದಾನವನ್ನು ನೀಡದಿರಲು ಕಾರಣವೇನು;

(ಆ) 2008 ರಿಂದ ಅಧಿಕಾರಕ್ಕೆ ಬಂದ ಸರ್ಕಾರಗಳು 1995 ರ ನಂತರ ಪ್ರಾರಂಭವಾದ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳನ್ನು ಅನುದಾನಕ್ಕೊಳಪಡಿಸದಿರುವುದಿಂದ ಕನ್ನಡ ಶಾಲೆಗಳು ಮುಚ್ಚುವ ಸ್ಥಿತಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದ ಅನುದಾನ ರಹಿತ ಕನ್ನಡ ಶಾಲೆ ಹಾಗೂ ಕನ್ನಡ ಭಾಷೆ ಉಳಿವಿಗೆ ಸರ್ಕಾರವು ಇನ್ನಾದರೂ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ, ಅನುದಾನ ನೀಡುವುದಕ್ಕೆ ಕ್ರಮ ತೆಗೆದುಕೊಳ್ಳಬಹುದೆ ?